# ಮೈಸೂರು ವಿಶ್ವವಿದ್ಯಾನಿಲಯ

(ಸ್ಥಾಪನೆ-1916)
(ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)
(ಎನ್‌ಐಆರ್‌ಎಫ್-2022 ವಿಶ್ವವಿದ್ಯಾನಿಲಯ ವರ್ಗದಲ್ಲಿ 33ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 54ನೇ ಸ್ಥಾನ)

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570 005


ಸಂಖ್ಯೆ:ಪ.ವಿ.8.4/47/2012-13 ದಿನಾಂಕ: 02-05-2023

## ಅಧಿಸೂಚನೆ

ವಿಷಯ: ಮೇ/ಜೂನ್ 2023ರಲ್ಲಿ ನಡೆಯುವ ಬಿ.ಎಡ್. ಪದವಿ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ಬಗ್ಗೆ.

ಉಲ್ಲೇಖ: ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಅವರ ಪರಿಷ್ಕೃತ ಶೈಕ್ಷಣಿಕ ವೇಳಾಪಟ್ಟಿಯ ಅಧಿಸೂಚನೆ ಸಂಖ್ಯೆ:ಎಸಿ6/159/2020-21, ದಿನಾಂಕ: 27-04-2023.

******

ಮೇ/ಜೂನ್ 2023ರಲ್ಲಿ ನಡೆಯಲಿರುವ ಪ್ರಥಮ ಹಾಗೂ ತೃತೀಯ ಸೆಮಿಸ್ಟರ್ (Repeaters) ಬಿ.ಎಡ್. (ಸಿ.ಬಿ.ಸಿ.ಎಸ್ ಮತ್ತು ಸಿ.ಎ.ಜಿ.ಪಿ ಸ್ಕೀಂ) ಪದವಿ ಲಿಖಿತ ಪರೀಕ್ಷೆಗಳು **ದಿನಾಂಕ: 30-05-2023** ರಿಂದ ಪ್ರಾರಂಭವಾಗುತ್ತವೆ. ಪ್ರಾಯೋಗಿಕ ಪರೀಕ್ಷೆಗಳು ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವುದಕ್ಕೆ ಮುಂಚಿತವಾಗಿ ನಡೆಯುತ್ತವೆ. ಪರೀಕ್ಷೆ ತೆಗೆದುಕೊಳ್ಳುವ ಅಭ್ಯರ್ಥಿಗಳು ಅರ್ಜಿ ಮತ್ತು ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಗೆ ಸಲ್ಲಿಸಲು ತಿಳಿಸಲಾಗಿದೆ. ಲಿಖಿತ ಪರೀಕ್ಷೆಗಳ ವೇಳಾಪಟ್ಟಿಯನ್ನು ನಂತರ ಕಳುಹಿಸಿ ಕೊಡಲಾಗುವುದು.

| | | |
|---|---|---|
| 1 | **ಪರೀಕ್ಷಾ ಅರ್ಜಿಗಳನ್ನು ಮೈಸೂರು ವಿಶ್ವವಿದ್ಯಾನಿಲಯದ ವೆಬ್‌ಸೈಟ್: www.uni-mysore.ac.in ಈ ವೆಬ್‌ಸೈಟ್‌ನಲ್ಲಿ Download ಮಾಡಿಕೊಳ್ಳುವುದು.** | |
| 2 | ಪರೀಕ್ಷಾ ಶುಲ್ಕವನ್ನು ಪಾವತಿ ಮಾಡಲು ಮತ್ತು ಭರ್ತಿಮಾಡಿದ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು ನಿಗದಿಪಡಿಸಿರುವ ಅಂತಿಮ ದಿನಾಂಕ | 12-05-2023 |
| 3 | ಪರೀಕ್ಷಾ ಶುಲ್ಕವನ್ನು ಚಲನ್/ಡಿ.ಡಿ ಮೂಲಕ **ಪರೀಕ್ಷಾ ಖಾತೆಗೆ (ಎಸ್.ಬಿ.ಐ, ವಿಶ್ವವಿದ್ಯಾನಿಲಯ ಆವರಣ ಶಾಖೆ, ಮೈಸೂರು) ಪಾವತಿಸಿ ಅದರ ಮೂಲ ಪ್ರತಿಯನ್ನು ಈ ಕಛೇರಿಗೆ ಕಳುಹಿಸಲು ನಿಗದಿಪಡಿಸಿರುವ ಅಂತಿಮ ದಿನಾಂಕ** | 15-05-2023 |
| 4 | ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಗಳನ್ನು ಕಾಲೇಜಿನವರು ಭರ್ತಿ ಮಾಡಲು ಅಂತಿಮ ದಿನಾಂಕ<br>(ಅರ್ಜಿಗಳನ್ನು ಸ್ವೀಕರಿಸಿದ ದಿನದಂದೇ ದಾಖಲಿಸುವುದು, ದಾಖಲಿಸಿದ ಮಾಹಿತಿಯನ್ನು ಪರಿಶೀಲಿಸಿದ ನಂತರ **lock** ಮಾಡುವುದು) | 15-05-2023 |
| 5 | ಪ್ರವೇಶ ಪತ್ರಗಳನ್ನು ಮುದ್ರಿಸಿಕೊಂಡು ವಿಶ್ವವಿದ್ಯಾನಿಲಯ ಅನುಮೋದನೆ ಪಡೆಯಲು ಅಂತಿಮ ದಿನಾಂಕ (ಆನ್‌ಲೈನ್ ಮೂಲಕ ಅಭ್ಯರ್ಥನಾ ಪಟ್ಟಿಯನ್ನು ಮುದ್ರಿಸಿ ಪ್ರಾಂಶುಪಾಲರ ಸಹಿ ಪಡೆದು ಒಂದು ಪ್ರತಿಯನ್ನು ಪ್ರವೇಶ ಪತ್ರಗಳ ಜೊತೆಯಲ್ಲಿ ಕುಲಸಚಿವ (ಪರೀಕ್ಷಾಂಗ) ಅವರಿಗೆ ಸಲ್ಲಿಸಬೇಕು) | 20-05-2023 |
| 6 | **ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ** | 30-05-2023 |

**ಪರೀಕ್ಷಾ ಶುಲ್ಕಗಳು :**

| | |
|---|---|
| ಪೂರ್ಣ ಪರೀಕ್ಷೆಗೆ | ರೂ.1,430/- |
| ಒಂದು ವಿಷಯಕ್ಕೆ (ಪ್ರಾಯೋಗಿಕ ಪರೀಕ್ಷೆಯೊಂದಿಗೆ) | ರೂ.847/- |
| ಒಂದು ವಿಷಯಕ್ಕೆ (ಪ್ರಾಯೋಗಿಕ ಪರೀಕ್ಷೆ ಹೊರತುಪಡಿಸಿ) | ರೂ.484/- |
| ಅಂಕಪಟ್ಟಿ ಶುಲ್ಕ | ರೂ.352/- |

**ವಿಶೇಷ ಸೂಚನೆ:**

1. ಎಲ್ಲಾ ಪದವಿ ವಿದ್ಯಾರ್ಥಿಗಳ ಆಂತರಿಕ ಮೌಲ್ಯಮಾಪನ ಅಂಕಗಳನ್ನು ಕಾಲೇಜಿನ ಇಂಟರ್‌ನೆಟ್ ಸೌಲಭ್ಯವನ್ನು ಬಳಸಿ ನೇರವಾಗಿ ವಿಶ್ವವಿದ್ಯಾನಿಲಯದ Web Serverಗೆ ಮಾಹಿತಿಯನ್ನು ವರ್ಗಾವಣೆ (Online Transmission) ಮಾಡುವಂತೆ ತಿಳಿಸಲಾಗಿದೆ. ಅನಿವಾರ್ಯ ಕಾರಣದಿಂದಾಗಿ ಕಾಲೇಜಿನಲ್ಲಿ ಇಂಟರ್‌ನೆಟ್ ಸೌಲಭ್ಯವಿಲ್ಲದಿದ್ದ ಪಕ್ಷದಲ್ಲಿ ಸ್ಥಳೀಯವಾಗಿ ಲಭ್ಯವಿರುವ ಯಾವುದೇ ಕಂಪ್ಯೂಟರ್ ಕೇಂದ್ರದಿಂದಲೂ ಮಾಹಿತಿ ರವಾನಿಸಬಹುದಾಗಿದೆ.
2. ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಆಯಾಯಾ ಕಾಲೇಜಿನವರು ಪರೀಕ್ಷೆಗಳು ಪ್ರಾರಂಭವಾಗುವುದಕ್ಕೆ ಸಾಕಷ್ಟು ಮುಂಚಿತವಾಗಿ Online ಮೂಲಕ ಪಡೆದು ಕುಲಸಚಿವ (ಪರೀಕ್ಷಾಂಗ) ಅವರ ಫ್ಯಾಸಿಮಿಲಿ ಹಾಕಿಸಿಕೊಳ್ಳಬೇಕು. ಕುಲಸಚಿವ (ಪರೀಕ್ಷಾಂಗ) ಅವರ ಫ್ಯಾಸಿಮಿಲಿ ಇಲ್ಲದೆ ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ಅವಕಾಶ ನೀಡಬಾರದೆಂದು ತಿಳಿಸಲಾಗಿದೆ.

**ಸೂಚನೆಗಳು:**

1. ಮೇಲ್ಕಂಡ ಶುಲ್ಕಗಳ ಜೊತೆಗೆ (ಪರೀಕ್ಷಾ ಶುಲ್ಕ ರಿಯಾಯಿತಿಗೆ ಅರ್ಹರಾಗುವ ಅಭ್ಯರ್ಥಿಗಳೂ ಸೇರಿದಂತೆ) ಎಲ್ಲರೂ ಅಂಕಪಟ್ಟಿ ಶುಲ್ಕ ರೂ.352/- ಪಾವತಿಸಬೇಕು.
2. ಶುಲ್ಕವನ್ನು ನಗದು/ಚೆಕ್ ಇತ್ಯಾದಿಗಳ ಮೂಲಕ ಸ್ವೀಕರಿಸಲಾಗುವುದಿಲ್ಲ.
3. ಪಾವತಿಸಬೇಕಾದ ಒಟ್ಟು ಶುಲ್ಕವನ್ನು **ಪರೀಕ್ಷಾ ಖಾತೆ ಸಂಖ್ಯೆ: 54007591200 (ಪರೀಕ್ಷಾ ಖಾತೆಗೆ), ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ವಿಶ್ವವಿದ್ಯಾನಿಲಯ ಆವರಣ ಶಾಖೆ, ಮೈಸೂರು ಇಲ್ಲಿಗೆ ಚಲನ್ ಅಥವಾ ಅನ್‌ಲೈನ್ ಮೂಲಕ ಸಂದಾಯ ಮಾಡಿ ಮೂಲಪ್ರತಿಯನ್ನು ಈ ಕಛೇರಿಗೆ ದಿನಾಂಕ: 15-05-2023ರೊಳಗೆ ಸಲ್ಲಿಸುವುದು.**
4. ಎಲ್ಲಾ ಅಭ್ಯರ್ಥಿಗಳು ಮೇಲೆ ಸೂಚಿಸಿದ ದಿನಾಂಕಗಳಂದು ಅಥವಾ ಅದಕ್ಕಿಂತ ಮುಂಚಿತವಾಗಿ ಪರೀಕ್ಷಾ ಶುಲ್ಕವನ್ನು ಪಾವತಿಸುವುದು ಹಾಗೂ ಅರ್ಜಿಗಳನ್ನು ಇತ್ತೀಚಿನ ಭಾವಚಿತ್ರದೊಡನೆ ಅಧ್ಯಯನ ಮಾಡಿದ ಕಾಲೇಜುಗಳ ಮೂಲಕ ಸಲ್ಲಿಸುವುದು.

ಆಯಾಯ ಕಾಲೇಜಿನ ಪ್ರಾಂಶುಪಾಲರುಗಳನ್ನು ಪರೀಕ್ಷಾ ಮುಖ್ಯ ಅಧೀಕ್ಷಕರನ್ನಾಗಿ ನೇಮಿಸಲಾಗಿದೆ. "Manual for Conduct of Examination" ರೀತಿಯಲ್ಲಿ ಪರೀಕ್ಷೆಗಳನ್ನು ಸುಸೂತ್ರವಾಗಿ ನಡೆಸಲು ಕ್ರಮ ತೆಗೆದುಕೊಳ್ಳಲು ಸಹ ಸೂಚಿಸಲಾಗಿದೆ.

ಕುಲಸಚಿವ (ಪರೀಕ್ಷಾಂಗ) ಅವರಿಂದ ಅನುಮೋದಿಸಲ್ಪಟ್ಟಿದೆ.

K.N. 02/5/23

ಉಪ ಕುಲಸಚಿವ (ಪರೀಕ್ಷಾಂಗ)

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಬಿ.ಎಡ್. ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಉಪಕುಲಸಚಿವರು (ಶೈಕ್ಷಣಿಕ), ಆಡಳಿತ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ವಿಶೇಷಾಧಿಕಾರಿಗಳು, ಪರೀಕ್ಷಾ ಸುಧಾರಣ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ವ್ಯವಸ್ಥಾಪಕರು, ಮೆ: ಮೆಟಾ-ಐ ಟೆಕ್ನಾಲಜಿ ಪ್ರೈವೇಟ್ ಲಿಮಿಟೆಡ್, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಅಧೀಕ್ಷಕರು/ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ (ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಸಂಬಂಧಿಸಿದ ಕಡತಕ್ಕೆ.